ಕರ್ನಾಟಕ ವಿಧಾನ ಪರಿಷತ್ತು

ಮಾನ್ಯ ಸದಸ್ಯರ ಹೆಸರು	:	ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	**1255**
ಉತ್ತರಿಸಬೇಕಾದ ದಿನಾಂಕ	:	22.09.2021
ಉತ್ತರಿಸಬೇಕಾದ ಸಚಿವರು	:	ವಸತಿ ಮತ್ತು ಮೂಲಸೌಲಭ್ಯ ಅಭಿವೃದ್ಧಿ ಸಚಿವರು

ಕ್ರ. ಸಂ.	ಪ್ರಶ್ನೆ	ಉತ್ತರ
(ಅ)	ಬೀದರ್ ಜಿಲ್ಲೆಯಲ್ಲಿ ಬಡವರಿಗೆ ಸೂರು ಒದಗಿಸುವ ಯೋಜನೆಗಳು ಯಾವುವು ;	ಬೀದರ್ ಜಿಲ್ಲೆಯನ್ನೊಳಗೊಂಡಂತೆ ರಾಜ್ಯದಲ್ಲಿ ಕೆಳಕಂಡ ವಿವಿಧ ವಸತಿ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ. **ರಾಜ್ಯ ಸರ್ಕಾರದ ಯೋಜನೆಗಳು:** 1. ಬಸವ ವಸತಿ ಯೋಜನೆ 2. ಡಾ.ಬಿ.ಆರ್.ಅಂಬೇಡ್ಕರ್ ನಿವಾಸ್ ಯೋಜನೆ (ಗ್ರಾಮೀಣ ಮತ್ತು ನಗರ) 3. ವಾಜಪೇಯಿ ನಗರ ವಸತಿ ಯೋಜನೆ 4. ದೇವರಾಜ್ ಅರಸು ವಸತಿ ಯೋಜನೆ (ಗ್ರಾಮೀಣ ಮತ್ತು ನಗರ) **ಕೇಂದ್ರ ಪುರಸ್ಕೃತ ಯೋಜನೆಗಳು:** ಪ್ರಧಾನ ಮಂತ್ರಿ ಆವಾಸ್ ಯೋಜನೆ (ಗ್ರಾಮೀಣ ಮತ್ತು ನಗರ). **ನಿವೇಶನ ಯೋಜನೆಗಳು :** 1. ಇಂದಿರಾ ಗ್ರಾಮೀಣ ವಸತಿ ನಿವೇಶನ ಯೋಜನೆ 2. ವಾಜಪೇಯಿ ನಗರ ನಿವೇಶನ ಯೋಜನೆ
(ಆ)	ಕಳೆದ 5 ವರ್ಷಗಳಲ್ಲಿ ಸೂರು ಒದಗಿಸುವ ಯೋಜನೆಗಳ ಸ್ಥಿತಿಗತಿಗಳೇನು ;	ಬೀದರ ಜಿಲ್ಲೆಗೆ 2016-17 ನೇ ಸಾಲಿನಿಂದ 2020-21 ನೇ ಸಾಲಿನವರೆಗೆ ವಿವಿಧ ವಸತಿ ಯೋಜನೆಯಡಿಯಲ್ಲಿ 57939 ಮನೆಗಳನ್ನು ಮಂಜೂರು ಮಾಡಿ ಕಾಮಗಾರಿ ಆದೇಶ ನೀಡಲಾಗಿರುತ್ತದೆ. ವಿವರ ಕೆಳಕಂಡಂತಿದೆ.

ಯೋಜನೆ	ಮಂಜೂರಾದ ಮನೆಗಳು	ಪೂರ್ಣಗೊಂಡ ಮನೆಗಳು	ಒಟ್ಟು ಪ್ರಗತಿಯಲ್ಲಿದ್ದ ಮನೆಗಳು	ಪ್ರಾರಂಭವಾಗಬೇಕಾದ ಮನೆಗಳು	ರದ್ದಾದ ಮನೆಗಳು
ಬಸವ ವಸತಿ ಯೋಜನೆ	16114	8105	6280	0	1729
ಡಾ|| ಬಿ.ಆರ್. ಅಂಬೇಡ್ಕರ್ ನಿವಾಸ್ ಯೋಜನೆ (ಗ್ರಾ & ನ)	22165	11516	8498	0	2151
ದೇವರಾಜು ಅರಸು ವಸತಿ ಯೋಜನೆ (ಗ್ರಾ & ನ)	1609	421	818	349	21
ಪ್ರಧಾನ ಮಂತ್ರಿ ಆವಾಸ್ ಯೋಜನೆ (ಗ್ರಾ)	2648	1933	555	41	119
ಪ್ರಧಾನ ಮಂತ್ರಿ ಆವಾಸ್ ಯೋಜನೆ (ನ) (ಎ ಹೆಚ್ ಪಿ + GoI 1.5 + PKGB)	13711	918	983	11810	0

		ವಾಜಪೇಯಿ ನಗರ ವಸತಿ ಯೋಜನೆ	1692	871	478	33	310
		ಒಟ್ಟು	**57939**	**23764**	**17612**	**12233**	**433**

(ಇ) ಈಗಾಗಲೇ ಮಂಜೂರಾದ ಮನೆಗಳ ಫಲಾನುಭವಿಗಳಿಗೆ ಬಿಡುಗಡೆಯಾದ ಅನುದಾನವೆಷ್ಟು; (ತಾಲ್ಲೂಕುವಾರು ವಿವರ ನೀಡುವುದು)

ಬೀದರ್ ಜಿಲ್ಲೆಗೆ 2016-17 ನೇ ಸಾಲಿನಿಂದ 2020-21 ನೇ ಸಾಲಿನವರೆಗೆ ವಿವಿಧ ವಸತಿ ಯೋಜನೆಯಡಿಯಲ್ಲಿ ಮಂಜೂರಾದ ಮನೆಗಳಿಗೆ ಜಿಪಿಎಸ್ ಆಧಾರಿತ ಭೌತಿಕ ಪ್ರಗತಿಗೆ ಅನುಗುಣವಾಗಿ ಫಲಾನುಭವಿಗಳ ಖಾತೆಗೆ ರೂ.369.55 ಕೋಟಿಗಳನ್ನು ಬಿಡುಗಡೆ ಮಾಡಲಾಗಿದೆ. ತಾಲ್ಲೂಕುವಾರು ವಿವರ ಕೆಳಕಡಂತಿದೆ.

(ರೂ. ಕೋಟಿಗಳಲ್ಲಿ)

ತಾಲ್ಲೂಕು	ಮೊತ್ತ
ಔರದ್	51.75
ಬಸವ ಕಲ್ಯಾಣ	45.37
ಭಾಲ್ಕಿ	117.54
ಬೀದರ್	41.00
ಚಿಟಗುಪ್ಪ	32.93
ಹುಲಸೂರು	9.33
ಹುಮನಾಬಾದ್	49.31
ಕಮಲನಗರ	22.32
ಒಟ್ಟು	**369.55**

(ಈ) ಬೀದರ್ ಜಿಲ್ಲೆಯಲ್ಲಿ ಮನೆ ನಿರ್ಮಾಣಕ್ಕೆ ಮಂಜೂರಾದ ಅನುದಾನವನ್ನು ತಡೆ ಹಿಡಿಯಲಾಗಿದೆಯೇ ? (ತಾಲ್ಲೂಕುವಾರು ವಿವರ ನೀಡುವುದು)

ಬೀದರ್ ಜಿಲ್ಲೆಗೆ 2016-17 ನೇ ಸಾಲಿನಿಂದ 2020-21 ನೇ ಸಾಲಿನವರೆಗೆ ವಿವಿಧ ವಸತಿ ಯೋಜನೆಯಡಿಯಲ್ಲಿ ಮಂಜೂರಾದ ಮನೆಗಳಿಗೆ ಜಿಪಿಎಸ್ ಆಧಾರಿತ ಭೌತಿಕ ಪ್ರಗತಿಗೆ ಅನುಗುಣವಾಗಿ ಫಲಾನುಭವಿಗಳ ಖಾತೆಗೆ ರೂ.416.12 ಕೋಟಿಗಳನ್ನು ಬಿಡುಗಡೆ ಮಾಡಲಾಗಿದೆ.

ವಿವಿಧ ವಸತಿ ಯೋಜನೆಗಳಡಿ ಮಂಜೂರಾದ ಮನೆಗಳಿಗೆ ಇಂದಿರಾ ಮನೆ ಆ್ಯಪ್ ನ ಮುಖಾಂತರ ಜಿ.ಪಿ.ಎಸ್ ಮಾಡಲಾದ ಮನೆಗಳ ಭೌತಿಕ ಪ್ರಗತಿಗನುಗುಣವಾಗಿ ಅನುದಾನ ಬಿಡುಗಡೆ ಮಾಡಲಾಗುತ್ತಿತ್ತು, ಆದರೆ, ಪ್ರಗತಿಯಲ್ಲಿರುವ ಮನೆಗಳಲ್ಲಿ ಕೆಲವು ಅನರ್ಹ ಫಲಾನುಭವಿಗಳ ಆಯ್ಕೆ ಕಂಡು ಬಂದಿರುವುದರಿಂದ ಅನುದಾನ ದುರ್ಬಳಕೆಯನ್ನು ತಡೆ ಹಿಡಿಯುವ ಉದ್ದೇಶದಿಂದ ಸರ್ಕಾರದ ಆದೇಶ ಸಂಖ್ಯೆ:ವಇ 154 ಹೆಚ್ಎಎಂ 2019, ದಿನಾಂಕ:16.11.2019 ರ ರೀತ್ಯಾ ಪ್ರಗತಿಯಲ್ಲಿರುವ ಮನೆಗಳನ್ನು ಇಂದಿರಾ ಮನೆ ಮೊಬೈಲ್ ಆಪ್ ಮೂಲಕ ಜಿ.ಪಿ.ಎಸ್ ಗೆ ಅಳವಡಿಸಿ, ಅರ್ಹಗೊಂಡ ನಂತರ ಸದರಿ ಮನೆಗಳ ಪ್ರಗತಿಯನ್ನು ಮತ್ತೊಮ್ಮೆ Geo ಆಧಾರಿತ ವಿಜಿಲ್ ಆಪ್ ಮೂಲಕ ಗ್ರಾಮೀಣ ಪ್ರದೇಶದಲ್ಲಿ ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿಯವರು ಹಾಗೂ ನಗರ ಪ್ರದೇಶದಲ್ಲಿ ಜಿಲ್ಲಾಧಿಕಾರಿಯವರು ಪರಿಶೀಲಿಸಿ, ದೃಢೀಕರಿಸಿದ ನಂತರ ಸದರಿ ಫಲಾನುಭವಿಗಳ ಆಧಾರ್ ಜೋಡಣೆಯಾದ ಬ್ಯಾಂಕ್ ಖಾತೆಗೆ ಡಿ.ಬಿ.ಟಿ ಮುಖಾಂತರ ಅನುದಾನ ಬಿಡುಗಡೆ ಮಾಡಲಾಗುತ್ತಿತ್ತು.

		ಮುಂದುವರೆದಂತೆ ವಿವಿಧ ವಸತಿ ಯೋಜನೆಗಳಡಿ ಪ್ರಗತಿಯಲ್ಲಿರುವ ಮನೆಗಳ ಫಲಾನುಭವಿಗಳಿಗೆ ಅನುದಾನ ಬಿಡುಗಡೆ ಮಾಡುವಾಗ ಇಂದಿರಾ ಆಪ್ ಮತ್ತು ವಿಜಿಲ್ ಆಪ್ ಎಂಬ ಎರಡು ಪರಿಶೀಲನಾ ವಿಧಾನಗಳ ಮೂಲಕ ಅನುದಾನ ಬಿಡುಗಡೆ ಆಗುತ್ತಿದ್ದು, ಇದರಿಂದ ಆಗುವ ವಿಳಂಬವನ್ನು ತಪ್ಪಿಸಲು ಮೇಲ್ಕಂಡ ಇಂದಿರಾ ಆಪ್ ಮತ್ತು ವಿಜಿಲ್ ಆಪ್ ಅನ್ನು ಒಗ್ಗೂಡಿಸಿ, ಇಂದಿರಾ ವಿಜಿಲ್ ಆಪ್ ಎಂಬ ನೂತನ ತಂತ್ರಾಂಶವನ್ನು ಅಳವಡಿಸಲಾಗಿದ್ದು, ಫಲಾನುಭವಿಗಳಿಗೆ ಶೀಘ್ರವಾಗಿ ಅನುದಾನ ಬಿಡುಗಡೆ ಮಾಡಲು ಕ್ರಮ ಕೈಗೊಳ್ಳಲಾಗಿದೆ.

ಸಂಖ್ಯೆ :ವಇ 341 ಹೆಚ್‌ಎಎಂ 2021

(ವಿ. ಸೋಮಣ್ಣ)
ವಸತಿ ಮತ್ತು ಮೂಲಸೌಲಭ್ಯ
ಅಭಿವೃದ್ಧಿ ಸಚಿವರು